All India Radio: Bangalore
Regional Bulletin In Kannada
30.08.2026 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಯುವ ಜನತೆಯನ್ನು ಚಟಗಳಿಂದ ದೂರವಿಡುವ ಪ್ರಯತ್ನದಲ್ಲಿ ಕೈಜೋಡಿಸುವಂತೆ ಮನ್ ಕಿ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಕರೆ
- ಪಿಎಂ ಸ್ವನಿಧಿ ಬೆಂಬಲದಿಂದ ಆರ್ಥಿಕ ಪರಿಸ್ಥಿತಿ ಉತ್ತಮಪಡಿಸಿಕೊಂಡ ಬೆಂಗಳೂರಿನ ಟಿ.ಎಸ್.ನಿಂಗಮ್ಮ ಮಹಿಳಾ ಸಬಲೀಕರಣದ ಜೀವಂತ ಉದಾಹರಣೆ : ಪ್ರಧಾನಮಂತ್ರಿ ಶ್ಲಾಘನೆ
- ಚಿಕ್ಕಮಗಳೂರಿನ ರೈತರಿಂದ ಕಾಫಿ ತೋಟದ ಮಧ್ಯೆ ಅವಕಾಡೊ ಕೃಷಿ ಸಂಪಾದನೆಯ ಹೊಸ ಮಾರ್ಗಕ್ಕಾಗಿ ಪ್ರಧಾನಿ ಮೆಚ್ಚುಗೆ
- ನೇಪಾಳ ಪ್ರವಾಸಕ್ಕೆ ತೆರಳಿದ್ದ ೫೪ ಜನ ಕನ್ನಡಿಗರು ತಾಯ್ನಾಡಿಗೆ ಸುರಕ್ಷಿತ ವಾಪಸ್
- ಭದ್ರಾ ಬಲದಂಡೆ ನಾಲೆಗೆ ಸೆಪ್ಟೆಂಬರ್ ೧ರಿಂದ ಕುಡಿಯುವ ನೀರು ಬಿಡುಗಡೆ

<><><><>

ಯುವಜನತೆಯನ್ನು ಚಟಗಳಿಂದ ದೂರವಿಡುವ ಪ್ರಯತ್ನದಲ್ಲಿ ಎಲ್ಲರೂ ಕೈಜೋಡಿಸುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಆಕಾಶವಾಣಿಯ ಮನದ ಮಾತು ಕಾರ್ಯಕ್ರಮದಲ್ಲಿಂದು ವಿಕಸಿತ ಭಾರತಕ್ಕಾಗಿ ಮಾದಕದ್ರವ್ಯ ಮುಕ್ತ ಯುವ ಸಮೂಹ ಅಭಿಯಾನ ದೇಶಾದ್ಯಂತ ವೇಗವಾಗಿ ಸಾಗಿದೆ. ಯುವಜನತೆ ಮಾದಕವಸ್ತುಗಳಿಂದ ದೂರ ಇರಬೇಕು. ಮದ್ಯಪಾನ ಅಥವಾ ಮಾದಕವಸ್ತುಗಳ ಚಟ ವ್ಯಕ್ತಿಯನ್ನು ಮಾತ್ರವಲ್ಲ ಇಡೀ ಕುಟುಂಬದ ಮೇಲೆ ದುಷ್ಪರಿಣಾಮ ಬೀರುತ್ತದೆ. ಅದನ್ನು ಸಮಾಜ ಅನುಭವಿಸಬೇಕಾಗುತ್ತದೆ. ಈ ನಿಟ್ಟಿನಲ್ಲಿ ದೇಶವನ್ನು ಮಾದಕದ್ರವ್ಯ ಮುಕ್ತವನ್ನಾಗಿಸಲು ಯುಕವರು ಸಾಲು ಸಾಲಾಗಿ ಕೈಜೋಡಿಸುತ್ತಿದ್ದಾರೆ ಎಂದು ಪ್ರಧಾನಿ ತಿಳಿಸಿದ್ದಾರೆ. ಮಾದಕದ್ರವ್ಯ ಮುಕ್ತ ಭಾರತಕ್ಕಾಗಿ ಪರಿಣಾಮಕಾರಿ ಘೋಷವಾಕ್ಯ ಅಥವಾ ಘೋಷಣೆಗಳನ್ನು ಸಿದ್ಧಪಡಿಸಬೇಕು. ಯುವ ಸಂಗೀತಗಾರರು ಮಾದಕವಸ್ತುಗಳಿಲ್ಲದ ಜೀವನ

ಎಷ್ಟು ಚಂದ ಎನ್ನುವ ಸಂದೇಶ ಕೊಡುವ ಹಾಡುಗಳನ್ನು ರಚಿಸಬೇಕು. ವಿದ್ಯಾರ್ಥಿಗಳು ಮತ್ತು ನಾಟಕ ತಂಡದವರು ಮಾದಕವಸ್ತುಗಳ ಅಪಾಯಗಳ ಬಗ್ಗೆ ಹಾಗೂ ಇದರಿಂದ ಹೊರಗೆ ಬರುವ ತರಹದ ಹೃದಯಸ್ಪರ್ಶಿ ಕಿರು ನಾಟಕಗಳನ್ನು ಬರೆದು ಹ್ಯಾಶ್‌ಟ್ಯಾಗ್ ಬಳಸಿ ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಳ್ಳಬೇಕು ಎಂದು ಪ್ರಧಾನಿಯವರು ಮನವಿ ಮಾಡಿದ್ದಾರೆ. ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪಿಎಂ-ಸ್ವನಿಧಿ ಫಲಾನುಭವಿಗಳಲ್ಲಿ ಸುಮಾರು ಶೇಕಡ ೪೧ರಷ್ಟು ಮಹಿಳೆಯರೇ ಇದ್ದಾರೆ. ದೇಶಾದ್ಯಂತ ಸುಮಾರು ೩೫ ಲಕ್ಷ ಮಹಿಳೆಯರು ಈ ಯೋಜನೆಯಡಿ ನೆರವು ಪಡೆದು ತಮ್ಮ ವ್ಯಾಪಾರವನ್ನು ವಿಸ್ತರಿಸಿಕೊಳ್ಳುತ್ತಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಮಾಹಿತಿ ನೀಡಿದರು. ಬೆಂಗಳೂರಿನ ಟಿ.ಎಸ್.ನಿಂಗಮ್ಮ ಉದಾಹರಣೆ ಕೂಡ ಸ್ಫೂರ್ತಿದಾಯಕವಾಗಿದೆ. ನಿಂಗಮ್ಮ ಪತಿ ಜೊತೆಗೂಡಿ ಇಡ್ಲಿ, ದೋಸೆ ಮತ್ತು ಸಾಂಬರ್ ಮಾರಾಟ ಮಾಡುವ ಸಣ್ಣ ಕೆಲಸ ಆರಂಭಿಸಿದರು. ವ್ಯಾಪಾರ ಬೆಳೆಸಲು ಹಣದ ಅಗತ್ಯವಿತ್ತು. ಅವರು ಪಿಎಂ-ಸ್ವನಿಧಿ ಮೂಲಕ ಬೆಂಬಲ ಪಡೆದು ತಳ್ಳುವ ಗಾಡಿಯನ್ನು ಉತ್ತಮಪಡಿಸಿಕೊಂಡು ಸಾಮಗ್ರಿಗಳನ್ನು ಸಗಟು ದರದಲ್ಲಿ ಕೊಂಡೊಕೊಳ್ಳಲು ಪ್ರಾರಂಭಿಸಿದರು ಹಾಗೂ ತಿಂಡಿಗಳ ಪಟ್ಟಿಯಲ್ಲಿ ಹೊಸ ಪದಾರ್ಥಗಳನ್ನು ಸೇರಿಸಿದರು. ಇದರಿಂದ ಗ್ರಾಹಕರು ಹೆಚ್ಚಾಗಿ ಸಂಪಾದನೆ ಉತ್ತಮವಾಯಿತು. ಕುಟುಂಬದ ಆರ್ಥಿಕ ಪರಿಸ್ಥಿತಿಯು ಸುಧಾರಿಸಿತು. ಇಂದು ಅವರು, ತಮ್ಮ ಮೂವರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಲು ಶಕ್ತರಾಗಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು. ಚಿಕ್ಕಮಗಳೂರಿನ ರೈತ ಸಹೋದರ, ಸಹೋದರಿಯರು ಕಾಫಿ ತೋಟದ ಮಧ್ಯೆ ಅವಕಾಡೊ ಕೃಷಿ ಕೈಗೊಳ್ಳುವ ಮೂಲಕ ಸಂಪಾದನೆಯ ಹೊಸ ಮಾರ್ಗವನ್ನು ಕಂಡು ಹಿಡಿದುಕೊಂಡಿದ್ದಾರೆ ಎಂದು ಪ್ರಧಾನಿಯವರು ಮನದ ಮಾತಿನಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಚಿಕ್ಕಮಗಳೂರಿನ ರೈತರ ಈ ಕ್ರಮದಿಂದ ಕಾಫಿ ಮತ್ತು ಕಾಳು ಮೆಣಸಿನ ಜೊತೆಗೆ ಹೆಚ್ಚುವರಿ ಆದಾಯ ಸಿಗುತ್ತಿದೆ. ನಗರಗಳ ಉಪಹಾರ ಗೃಹಗಳಲ್ಲಿ ಅವಕಾಡೊ ಟೋಸ್ಟ್ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ನವೀನ ಆಲೋಚನೆಯ ರೈತರು ಅವಕಾಡೊ ಬೆಳೆಯುತ್ತಿದ್ದಾರೆ. ಇದರಿಂದ ವ್ಯಂಜನದ ರುಚಿಯೊಂದಿಗೆ ರೈತರ ಆದಾಯವು ಹೆಚ್ಚುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ : ನರೇಂದ್ರ ಮೋದಿ (೨೦ ಸೆಕೆಂಡ್‌ಗಳು)

<><><><>

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಅರಿವು ಕೇಂದ್ರ ಗ್ರಂಥಾಲಯಗಳ ಮೇಲ್ವಿಚಾರಕರಿಗೆ ಕನಿಷ್ಠ ವೇತನ ಖಾತರಿ ಪಡಿಸಲು ಕ್ರಮ ವಹಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಈಶ್ವರ್ ಬಿ.ಖಂಡ್ರೆ ತಿಳಿಸಿದ್ದಾರೆ. ರಾಜ್ಯದಲ್ಲಿ ಸುಮಾರು ೫ ಸಾವಿರದ ೪೨೦ಕ್ಕೂ ಅಧಿಕ ಗ್ರಂಥಾಲಯ ಮೇಲ್ವಿಚಾರಕರು ಇದ್ದಾರೆ. ಅವರಿಗೆ ಈ ಹಿಂದೆ ೧೨ ಸಾವಿರ ರೂಪಾಯಿ ಗೌರವ ಧನ ನೀಡಲಾಗುತ್ತಿತ್ತು. ಕಾರ್ಮಿಕ ಇಲಾಖೆ ಕನಿಷ್ಠ ವೇತನ ಪರಿಷ್ಕರಿಸಿದ ನಂತರ ಗೌರವ ಧನ ೧೯ ಸಾವಿರದ ೨೦೧ ರೂಪಾಯಿ ಆಗಿದೆ ಎಂದು ಸಚಿವರು ತಿಳಿಸಿದ್ದಾರೆ.

<><><>

ನೇಪಾಳ ಪ್ರವಾಸಕ್ಕೆ ತೆರಳಿದ್ದ ೫೪ ಜನ ಕನ್ನಡಿಗರು ಇಂದು ಸುರಕ್ಷಿತವಾಗಿ ಮರಳಿದ್ದಾರೆ. ದೇವನಹಳ್ಳಿ ಬಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಈ ಪ್ರವಾಸಿಗರು ಉತ್ತರ ಪ್ರದೇಶದ ಗೋರಖ್ ಪುರದ ಮೂಲಕ ಇಂದು ಹಿಂದಿರುಗಿದ್ದಾರೆ. ಹಾವೇರಿ, ಶಿವಮೊಗ್ಗ ಹಾಗೂ ರಾಜ್ಯದ ವಿವಿಧ ಕಡೆಯ ೫೪ ಮಂದಿ ಆಗಸ್ಟ್ ೨೩ರಂದು ನೇಪಾಳ ಪ್ರವಾಸಕ್ಕೆ ತೆರಳಿದ್ದರು.

<><><>

ದಾವಣಗೆರೆ ಹಾಗೂ ಚನ್ನಗಿರಿ ತಾಲ್ಲೂಕುಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಗೆ ನೆರವಾಗುವಂತೆ ಭದ್ರಾ ಬಲದಂಡೆ ನಾಲೆಯಿಂದ ನಾಡಿದ್ದಿನಿಂದ ೧೦ ದಿನಗಳ ಕಾಲ ನೀರು ಹರಿಸಲಾಗುವುದು ಎಂದು ಭದ್ರಾ ಯೋಜನೆಯ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ. ಪ್ರತಿದಿನ ೧ ಸಾವಿರದ ೫೦೦ ಕ್ಯೂಸೆಕ್ ಪ್ರಮಾಣದಲ್ಲಿ ನೀರು ಬಿಡಲಾಗುತ್ತಿದ್ದು, 'ನಾಲೆಯಲ್ಲಿ ಬಿಡಲಾಗುವ ನೀರನ್ನು ಕೇವಲ ಕುಡಿಯುವ ನೀರಿನ ಉದ್ದೇಶಕ್ಕೆ ಮಾತ್ರ ಬಳಕೆ ಮಾಡಿಕೊಳ್ಳಬೇಕು. ಅಚ್ಚುಕಟ್ಟು ಪ್ರದೇಶದ ಬೆಳೆಗಳಿಗೆ ನೀರು ಬಳಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ" ಎಂದು ಸ್ಪಷ್ಟಪಡಿಸಿದ್ದಾರೆ. 'ರೈತರು ನಾಲೆಯಿಂದ ಅಕ್ರಮವಾಗಿ ಪಂಪ್‌ಸೆಟ್ ಮೂಲಕ ನೀರು ಎತ್ತುವುದು ಅಥವಾ ಕಾಲುವೆ ವ್ಯಾಪ್ತಿಯಲ್ಲಿ ದನಕರುಗಳನ್ನು ಇಳಿಸುವುದು ಹಾಗೂ ಸಾರ್ವಜನಿಕರು ಓಡಾಡುವುದನ್ನು ಮಾಡಬಾರದು. ನಿಯಮ ಉಲ್ಲಂಘಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು" ಎಂದು ಭದ್ರಾ ಯೋಜನೆಯ ಅಧೀಕ್ಷಕ ಅಭಿಯಂತರರು ಎಚ್ಚರಿಸಿದ್ದಾರೆ.

<><><>

ಹಾವೇರಿ ಜಿಲ್ಲೆಯಲ್ಲಿ ಮಾದಕ ವಸ್ತು ಸಾಗಣೆ, ಮಾರಾಟ ಹಾಗೂ ಬಳಕೆ ವಿರುದ್ಧ ನಿರಂತರವಾಗಿ ಕಾರ್ಯಾಚರಣೆ ನಡೆಸಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ೧೨ ಪ್ರಕರಣಗಳನ್ನು ದಾಖಲಿಸಿಕೊಂಡು, ೩೪ ಕೆ.ಜಿ. ಗಾಂಜಾ ಜಪ್ತಿ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೧೧೧ ಮಂದಿ ಮಾದಕ ವಸ್ತು ಬಳಕೆದಾರರನ್ನು ಗುರುತಿಸಲಾಗಿದೆ. ಅವರಲ್ಲಿ ೮೦ ಮಂದಿ, ಮಾದಕದ್ರವ್ಯ ಬಳಕೆಯಿಂದ ಮುಕ್ತರಾಗಿದ್ದಾರೆ. ವ್ಯಸನಿಗಳ ಮೇಲೆ ನಿಗಾ ವಹಿಸಲು ಪೊಲೀಸ್ ಇಲಾಖೆಯಿಂದ ೯೨ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಈ ಸಿಬ್ಬಂದಿ, ಸಂಬಂಧಪಟ್ಟ ವ್ಯಕ್ತಿಗಳ ಮೇಲ್ವಿಚಾರಣೆ ನಡೆಸುವ ಜೊತೆಗೆ, ಅವರನ್ನು ವ್ಯಸನದಿಂದ ಹೊರತರಲು ಅಗತ್ಯ ಸಹಕಾರ ಮತ್ತು ಮಾರ್ಗದರ್ಶನ ನೀಡಲಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಾಹಿತಿ ನೀಡಿದ್ದಾರೆ.

<><><><>

ಮುಂದಿನ ತಿಂಗಳ ೧೯ ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್ ನಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ೭ ಸಾವಿರ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಆಗಿರುವ ಹಿರಿಯ ಸಿವಿಲ್ ನ್ಯಾಯಾಧೀಶರಾದ ನ್ಯಾಯಮೂರ್ತಿ ದಿವ್ಯಶ್ರೀ ತಿಳಿಸಿದ್ದಾರೆ. ಅವರು ಕಾರವಾರದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರಸ್ತುತ ಜಿಲ್ಲೆಯಾದ್ಯಂತ ಎಲ್ಲಾ ನ್ಯಾಯಾಲಯಗಳಲ್ಲಿ ಒಟ್ಟು ೪೩ ಸಾವಿರದ ೧೧೩ ಪ್ರಕರಣಗಳು ಬಾಕಿ ಇವೆ. ಜಿಲ್ಲೆಯಲ್ಲಿ ಜುಲೈ ತಿಂಗಳಲ್ಲಿ ನಡೆದ ಲೋಕ ಅದಾಲತ್‌ನಲ್ಲಿ ಸುಮಾರು ೬ ಸಾವಿರದ ೭೩೧ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿತ್ತು ಎಂದು ತಿಳಿಸಿದರು. ನ್ಯಾಯಾಲಯಗಳಲ್ಲಿ ಬಾಕಿ ಇರುವ ರಾಜಿಯಾಗಬಲ್ಲ ಸಿವಿಲ್, ಕ್ರಿಮಿನಲ್, ಸಾಲ ವಸೂಲಾತಿ ಹಾಗೂ ಚೆಕ್ ಬೌನ್ಸ್ ಪ್ರಕರಣಗಳು, ಕೌಟುಂಬಿಕ ವಿವಾದಗಳು, ಅಪಘಾತ ಪರಿಹಾರ, ಭೂ ಸ್ವಾಧೀನ ಪರಿಹಾರ ಸೇರಿದಂತೆ ಇತರೆ ರಾಜಿಯಾಗಬಲ್ಲ ಪ್ರಕರಣಗಳನ್ನು ಸಂಬಂಧಪಟ್ಟ ನ್ಯಾಯಾಲಯಕ್ಕೆ ತಿಳಿಸುವ ಅಥವಾ ಅರ್ಜಿ ಸಲ್ಲಿಸುವ ಮೂಲಕ ಪ್ರಕರಣ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ. ಸಾರ್ವಜನಿಕರು ಲೋಕ ಅದಾಲತ್ ನ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಮನವಿ ಮಾಡಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ರಾಜ್ಯದ ವಿವಿಧೆಡೆ ಇಂದು ರಾಘವೇಂದ್ರ ಸ್ವಾಮಿಗಳ ೩೫೫ನೇ ಆರಾಧನಾ ಮಹೋತ್ಸವ ಆಚರಿಸಲಾಗುತ್ತಿದೆ. ದೊಡ್ಡಬಳ್ಳಾಪುರದ ರಾಘವೇಂದ್ರ ಸ್ವಾಮಿ ಮಠದಲ್ಲಿ ಆರಾಧನಾ ಮಹೋತ್ಸವದ ಅಂಗವಾಗಿ ರಾಯರ ಬೃಂದಾನವನಕ್ಕೆ ವಿಶೇಷ ಅಲಂಕಾರ, ಪೂಜೆ ಹೋಮಗಳನ್ನು ಹಮ್ಮಿಕೊಳ್ಳಲಾಗಿತ್ತು.
2. ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಮಾಡಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಬಿ ಜಿ ರಾಮ್ ಜಿ ಯೋಜನೆ ಹಾಗೂ ಜಾಬ್ ಕಾರ್ಡ್ ಮೇಳದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದ ಜಾಗೃತಿ ಅಭಿಯಾನಕ್ಕೆ ಕಾರ್ಯನಿರ್ವಾಹಕ ಅಧಿಕಾರಿ ವಿ. ಕೃಷ್ಣ ಇಂದು ಚಾಲನೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>